ಸಿ.ಸಿ.ನಂ.**212/2020**

**<u>ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ.ರವರ ನ್ಯಾಯಾಲಯ, ತರೀಕೆರೆ.</u>**

**<u>ಸಂಚಾರಿ ನ್ಯಾಯಾಲಯ, ಅಜ್ಜಂಪುರ</u>**

**<u>ಕ್ರಿ ಮೊ ಸಂಖ್ಯೆ 212/2020</u>**

**<u>ಪಿರ್ಯಾದಿಃ</u>** **ಶ್ರೀ ಸಿ.ಎಸ್.ಮರಿಯಪ್ಪ**

**-ವಿರುದ್ದ-**

**<u>ಆರೋಪಿ/ತರುಃ</u>** **ಶ್ರೀ ಚಂದಪ್ಪ.ಟಿ.ಎಂಂ**

**<u>ದಂಡ ಪ್ರಕ್ರಿಯಾ ಸಂಹಿತೆ ಕಲಂ 313 ರಡಿಯಲ್ಲಿಆರೋಪಿಯ ಹೇಳಿಕೆ</u>**

ಪ್ರಶ್ನೆ-1: ನೀವು ಸಾಕ್ಷಿದಾರರ ಸಾಕ್ಷ್ಯದ ಹೇಳಿಕೆಯನ್ನು ಕೇಳಿಸಿಕೊಂಡಿದ್ದೀರಾ?

ಉತ್ತರ: Yes

ಪ್ರಶ್ನೆ-2: ಪಿಡಬ್ಲ್ಯೂ-1. ಶ್ರೀ ಸಿ.ಎಸ್. ಮರಿಯಪ್ಪ ತಮ್ಮ ಸಾಕ್ಷ್ಯದಲ್ಲಿ ಆರೋಪಿಯಾದ ನೀವು ಅಡಿಕೆ ವ್ಯಾಪಾರವನ್ನು ಮಾಡುತ್ತಿದ್ದು, ಪಿರ್ಯಾದಿಯು ಅವರ ತೋಟದಲ್ಲಿ ಬೆಳೆದಂತಹ 80 ಕ್ವಿಂಟಾಲ್ ಒಣಅಡಿಕೆಯನ್ನು ದಿನಾಂಕ 06.10.2019 ರಂದು ಆರೋಪಿಯಾದ ನೀವು ಕ್ವಿಂಟಾಲ್‌ಗೆ 40 ಸಾವಿರಗಳಂತೆ ಒಟ್ಟು ರೂ.32,00,000/- ಗಳಿಗೆ ವ್ಯಾಪಾರ ಮಾಡಿ ತೆಗೆದುಕೊಂಡಿದ್ದು, ಅಡಿಕೆ ತೆಗೆದುಕೊಂಡ ದಿವಸ ರೂ.25,142/- ಗಳನ್ನು ಮುಂಗಡವಾಗಿ ನೀಡಿದ್ದು, ಬಾಕಿ ಉಳಿದ ರೂ.31,74,858/- ಗಳನ್ನು

ಕೊಡುತ್ತೇನೆ ಎಂದು ತೆಗೆದುಕೊಂಡು ಹೋಗಿರುತ್ತೀರಿ ಎಂದು ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಿ?

ಉತ್ತರಃ False

ಪ್ರಶ್ನೆ-3:ಪಿಡಬ್ಲೂ-1 ರವರು ಮುಂದುವರೆದು ತಮ್ಮ ಸಾಕ್ಷ್ಯದಲ್ಲಿ, ಆರೋಪಿಯಾದ ನೀವು ಅಡಿಕೆ ತೆಗೆದುಕೊಂಡು ಬಾಕಿ ಉಳಿದ ಹಣಕ್ಕೆ ದಿನಾಂಕ 04.12.2019 ರ ದಿನಾಂಕವನ್ನು ನಮೂದಿಸಿ ಇಂಡಿಯನ್ ಬ್ಯಾಂಕ್, ಗೊಪ್ಪೆನಹಳ್ಳಿ ಶಾಖೆ, ಚನ್ನಗಿರಿ ತಾಲ್ಲೂಕಿಗೆ ಸೇರಿದ ಚೆಕ್ ಸಂಖ್ಯೆ 197934 ನ್ನು ರೂ.31,74,858/- ಗಳಿಗೆ ನೀಡಿದ್ದು, ಸದರಿ ಚೆಕ್ಕನ್ನು ಪಿರ್ಯಾದಿಯು ಕಾರ್ಪೋರೇಷನ್ ಬ್ಯಾಂಕ್, ಶಿವನಿ ಶಾಖೆಯಲ್ಲಿ ನಗದೀಕರಣಕ್ಕಾಗಿ ಹಾಜರುಪಡಿಸಿದಾಗ ಸದರಿ ಬ್ಯಾಂಕಿನವರು ಸದರಿ ಚೆಕ್ಕು ಆರೋಪಿಯಾದ ನಿಮ್ಮ ಖಾತೆಯ '**ಸಾಕಷ್ಟು ಹಣವಿಲ್ಲವೆಂದು**' ಎಂಬ ಕಾರಣಕ್ಕಾಗಿ ಅಮಾನ್ಯಗೊಂಡಿದೆ ಎಂದು ಹಿಂಬರಹ ನೀಡಿರುತ್ತಾರೆ ಎಂದು ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಿ?

ಉತ್ತರಃ False

ಪ್ರಶ್ನೆ-3:ಪಿಡಬ್ಲೂ-1 ರವರು ಮುಂದುವರೆದು ತಮ್ಮ ಸಾಕ್ಷ್ಯದಲ್ಲಿ, ಅನಂತರ ಪಿರ್ಯಾದಿಯು ದಿನಾಂಕ 27.12.2019 ರಂದು ವಕೀಲರ ಮೂಲಕ ನೋಟೀಸ್ ನೀಡಿದ್ದು, ಸದರಿ ನೋಟೀಸ್ ಅನ್ನು ಆರೋಪಿಯಾದ ನೀವು ಸ್ವೀಕರಿಸದೆ ಇದ್ದಕಾರಣ ದಿನಾಂಕ 07.01.2020 ರಂದು ವಾಪಸ್ಸು ಬಂದಿದ್ದು, ಮತ್ತು ಯಾವುದೇ ಹಣವನ್ನು ಮರುಪಾವತಿ ಮಾಡಿರುವುದಿಲ್ಲ ಎಂದು ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಿ?

ಉತ್ತರಃ False

ಪ್ರಶ್ನೆ-4: ಪಿಡಬ್ಲೂ-1 ರವರು ಮುಂದುವರೆದು ತಮ್ಮ ಸಾಕ್ಷ್ಯದಲ್ಲಿ, ಆರೋಪಿಯಾದ ನೀವು ಮೋಸ ಮಾಡುವ ಉದ್ದೇಶದಿಂದ ನಿಮ್ಮ ಖಾತೆಯಲ್ಲಿ ಸಾಕಷ್ಟು ಹಣವಿಲ್ಲ ಎಂಬ ವಿಚಾರ ತಿಳಿದಿದ್ದರೂ ಸದರಿ ಚೆಕ್ ನ್ನು ತನಗೆ ನೀಡಿರುತ್ತೀರಿ, ನಂತರ ತಾನು ಆರೋಪಿಯಾದ ನಿಮಗೆ ನೋಟೀಸು ನೀಡಿದರೂ ಸಹ ಆರೋಪಿಯಾದ

ನೀವು ಸದರಿ ಸಾಲದ ಹಣವನ್ನು ಹಿಂತಿರುಗಿಸಿರುವುದಿಲ್ಲ ಎಂದು ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಿ ?

ಉತ್ತರ: False

ಪ್ರಶ್ನೆ-5: ನೀವು ಏನಾದರೂ ಹೇಳುವುದಿದೆಯಾ ?
ಉತ್ತರ: Not at this moment

ಪ್ರಶ್ನೆ-6: ಈ ಪ್ರಕರಣದಲ್ಲಿ ನಿಮ್ಮ ಪರ ಸಾಕ್ಷಿ/ಪ್ರತಿರಕ್ಷಣೆ ಏನಾದರೂ ಇದೆಯೇ ?

ಉತ್ತರ: Yes

(ಈ ಹೇಳಿಕೆಯನ್ನು ಆರೋಪಿಗೆ ತೆರೆದ ನ್ಯಾಯಾಲಯದಲ್ಲಿ ಕನ್ನಡ ಭಾಷೆಯಲ್ಲಿ ಓದಿ ಹೇಳಿದ್ದು, ಆರೋಪಿಯ ಉತ್ತರನ್ನು ಯಥಾವತ್ತಾಗಿ ದಾಖಲಿಸಿದ್ದೇನೆ.)

ದಿನಾಂಕ: 09.01.2026

ಸಹಿ/-
**(ರಾಹುಲ್ ಶೆಟ್ಟಿಗಾರ್)**
**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು**
**ಪ್ರ.ದ.ನ್ಯಾ.ದಂ., ತರೀಕೆರೆ.**
**(ಸಂಚಾರಿ ನ್ಯಾಯಾಲಯ, ಅಜ್ಜಂಪುರ)**